**<u>3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಕಡೂರು</u>**

**<u>ಸಿಸಿ. ನಂ.3743/2023</u>**

ಫಿರ್ಯಾದಿ : **ಬೀರೂರು ಪೊಲೀಸ್ ಠಾಣೆ**

ವಿರುದ್ದ

ಆರೋಪಿಗಳು :

1. **ಶ್ರೀ ಯೋಗೀಶ.ಹೆಚ್.ಸಿ,**
ಬಿನ್ ಶ್ರೀ ಚನ್ನಪ್ಪ,
ವಯಸ್ಸು ಸುಮಾರು 35 ವರ್ಷ,

2. **ಶ್ರೀ ಚನ್ನಪ್ಪ,**
ಬಿನ್ ಶ್ರೀ ವೆಂಕಟಪ್ಪ,
ವಯಸ್ಸು ಸುಮಾರು 65 ವರ್ಷ,

3. **ಶ್ರೀ ಸತೀಶ.ಹೆಚ್.ಸಿ,**
ಬಿನ್ ಶ್ರೀ ಚನ್ನಪ್ಪ,
ವಯಸ್ಸು ಸುಮಾರು 25 ವರ್ಷ,

4. **ಶ್ರೀ ಸುರೇಶ,**
ಬಿನ್ ಶ್ರೀ ಸಿದ್ದಪ್ಪ,
ವಯಸ್ಸು ಸುಮಾರು 47 ವರ್ಷ,

ಎಲ್ಲರ ವಾಸಃ ಹಿರೇನಲ್ಲೂರು ಕಾವಲು,
ಕಡೂರು ತಾಲ್ಲೂಕು

## <u>:ದೋಷಾರೋಪಣೆಃ</u>

ಶ್ರೀಮತಿ ಸವಿತರಾಣಿ ಹೆಚ್.ವಿ., ಬಿ.ಎ.ಎಲ್., ಎಲ್.ಎಲ್.ಬಿ., ಸಿ.ಸಿ. 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ, ಕಡೂರು ಆದ ನಾನು ಈ ಮೂಲಕ ಕೆಳಕಂಡಂತೆ ಆಪಾದಿತರಾದ ನಿಮ್ಮಗಳ ಮೇಲೆ ಹೊರೆಸುವ ದೋಷಾರೋಪಣೆ.

ಮೊದಲನೇಯದಾಗಿ, ದಿನಾಂಕ 30.08.2023 ರಂದು ಸಂಜೆ 5.45 ಗಂಟೆ ಸಮಯದಲ್ಲಿ ಬೀರೂರು ಪೋಲಿಸ್ ಠಾಣಾ ಸರಹದ್ದಿಗೆ ಸೇರಿದ ಹಿರೇನಲ್ಲೂರು ಕಾವಲು ಗ್ರಾಮದ ಪುಂಡಲೀಕ ವಾಸದ ಮನೆಯ ಮುಂಭಾಗದ ಸಾರ್ವಜನಿಕ ರಸ್ತೆಯಲ್ಲಿ ಚಾಸಾ-1 ರವರಿಗೆ 1 ನೇ ಆರೋಪಿಯಾದ ನೀವು 2 ರಿಂದ 4 ನೇ ಆರೋಪಿತರೊಂದಿಗೆ ಸೇರಿಕೊಂಡು ಸಮಾನ ಉದ್ದೇಶದಿಂದ, ಚಾಸಾ-1 ರವರಿಗೆ ಮೆಂಬರ್ ಗೆ ಪೋನ್ ಮಾಡುತ್ತೀಯಾ ಸೂಳೇಮಗನೇ, ಬೋಳಿಮಗನೇ ಎಂದು ಅವಾಚ್ಯವಾಗಿ ಬೈದುದಲ್ಲದೇ, 3 ಮತ್ತು 4 ನೇ ಆರೋಪಿತರಾದ ನೀವು ಚಾಸಾ-2 ಕುಮಾರಿ ನಯನರವರಿಗೆ ಬೋಸುಡಿ ಬೇವರ್ಸಿಮುಂಡೆ ಎಂದು ಬೈದು ಅವಮಾನ ಮಾಡಿದ್ದು, ಆದಕಾರಣ 1, 3 ಮತ್ತು 4 ನೇ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, ನಿಮ್ಮಗಳ ಪೈಕಿ 1 ನೇ ಆರೋಪಿತರಾದ ನೀವು ಚಾಸಾ-1 ರವರ ಎದೆಯನ್ನು ಹಿಡಿದು ತಳ್ಳಿದ್ದು, 3 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಕೈಯಿಂದ ಮೈಕೈಗೆ ಹೊಡೆದಿದ್ದು ಹಾಗೂ 4 ನೇ ಆರೋಪಿತರಾದ ನೀವು ಕೈಗಳಿಂದ ಚಾಸಾ-1 ರವರ ಮೈಕೈಗೆ ಹೊಡೆದುದಲ್ಲದೆ, ಚಾಸಾ-2 ರವರಿಗೆ ಕಾಲಿನಿಂದ ಹೊಟ್ಟೆಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಆದಕಾರಣ 1, 3 ಮತ್ತು 4 ನೇ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಮೂರನೇಯಾದಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, ನಿಮ್ಮಗಳ ಪೈಕಿ 4 ನೇ ಆರೋಪಿತರಾದ ನೀವು ಚಾಸಾ-4 ರವರ ಬಟ್ಟೆಯನ್ನು ಹಿಡಿದು ಎಳೆದಾಡಿ ಕೆಳಗೆ ಬಿಳಿಸಿ ಅವರ ಮಾನಕ್ಕೆ ದಕ್ಕೆಯನ್ನುಂಟು ಮಾಡಿದ್ದು, ಆದಕಾರಣ 4 ನೇ ಆರೋಪಿಯಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಸಮಾನ ಉದ್ದೇಶದಿಂದ ಮುಂದುವರಿದು, 1 ರಿಂದ 4 ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ನಿಮ್ಮನ್ನು ಇಷ್ಟಕ್ಕೆ ಬಿಡುವುದಿಲ್ಲ ಕೊಲೆ ಮಾಡುತ್ತೇವೆಂದು ಬೆದರಿಕೆ ಹಾಕಿದ್ದು, ಆದಕಾರಣ 1 ರಿಂದ 4 ನೇ ಆರೋಪಿತರಾದ ನೀವು **ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೇಯ ಒಳಗೆ ಮಾಡಿರುವಿರಿ.

ಆದ್ದರಿಂದ ನೀವುಗಳು ಮೇಲ್ಕಂಡ ದಂಡನೀಯ ಅಪರಾದಗಳ ಮೇಲೆ ಈ ನ್ಯಾಯಾಲಯದಿಂದ ವಿಚಾರಣೆಗೆ ಒಳಪಡತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿಃ 08.02.2024

ಸಹಿ**/-**

**(ಶ್ರೀಮತಿ ಸವಿತರಾಣಿ ಹೆಚ್.ವಿ.)**
**ಸಿ.ಸಿ 3 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆಎಂಎಫ್‌ಸಿ, ಕಡೂರು.**